# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕೊಡಗು ಜಿಲ್ಲೆ, ಮಡಿಕೇರಿ–571201

**Office of the Deputy Commissioner, Kodagu District, Madikeri-571201**

ದೂರವಾಣಿ ಸಂ:08272–225932 ಫ್ಯಾಕ್ಸ್ ಸಂ:225900 E-Mail:-deo.kodagu@gmail.com


ಸಂಖ್ಯೆ:ಚುನಾ:60:2024-25 ದಿನಾಂಕ:24-02-2025

## ಪ್ರಕಟಣೆ

**ವಿಷಯ:-** ಕೊಡಗು ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ಶಾಖೆಯಲ್ಲಿ ಖಾಲಿ ಇರುವ ಜಿಲ್ಲಾ ಟೆಕ್ನಿಕಲ್ ಪ್ರೋಗ್ರಾಮರ್ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸುವ ಕುರಿತು.

******

ಕೊಡಗು ಜಿಲ್ಲಾಧಿಕಾರಿಗಳ ಕಚೇರಿಯ ಚುನಾವಣಾ ಶಾಖೆಯಲ್ಲಿ ಜಿಲ್ಲಾ ಟೆಕ್ನಿಕಲ್ ಪ್ರೋಗ್ರಾಮರ್ ಹುದ್ದೆಯು ಖಾಲಿ ಇದ್ದು, ಸದರಿ ಹುದ್ದೆಗೆ ಗುತ್ತಿಗೆ ಆಧಾರದ ಮೇಲ ನೇಮಕ ಮಾಡಿಕೊಳ್ಳುವ ಸಂಬಂಧ ಆರ್ಹ ಅಭ್ಯರ್ಥಿಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಜಿದಾರರು ನಿಗಧಿತ ಅರ್ಜಿ ನಮೂನೆಯನ್ನು ಜಿಲ್ಲೆಯ ಅಧಿಕೃತ ವೆಬ್ ಸೈಟ್ https://kodagu.nic.in ರಲ್ಲಿ ಪಡೆದು ಭರ್ತಿಮಾಡಿ ಎಲ್ಲಾ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವುದು. ವಿವರ ಈ ಕೆಳಕಂಡಂತೆ ಇರುತ್ತದೆ.

**ಕಚೇರಿ ವಿಳಾಸ** : ಜಿಲ್ಲಾಧಿಕಾರಿಗಳ ಕಚೇರಿ, ಕೊಡಗು ಜಿಲ್ಲೆ, ಮಡಿಕೇರಿ.
**ಹುದ್ದೆಯ ಹೆಸರು** : ಜಿಲ್ಲಾ ಟೆಕ್ನಿಕಲ್ ಪ್ರೋಗ್ರಾಮರ್
**ಹುದ್ದೆಯ ಸಂಖ್ಯೆ** : 01

| | | |
|---|---|---|
| 1 | ಶೈಕ್ಷಣಿಕ ವಿದ್ಯಾರ್ಹತೆ | B.E or B.Tech / BCA / MCA<br>Stream : Computer Science or Information Science Enginnering, Electronic and Communication Telecom |
| 2 | ಅನುಭವ | ಯಾವುದೇ ಸರ್ಕಾರಿ ಕಚೇರಿಯಲ್ಲಿ / ಕಂಪನಿ/ಸಂಸ್ಥೆಗಳಲ್ಲಿ ಕನಿಷ್ಟ 2 ವರ್ಷಗಳ ಅನುಭವ ಹೊಂದಿರತಕ್ಕದ್ದು. |
| 3 | ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ | ದಿನಾಂಕ: 05-03-2025<br>ಸಂಜೆ 5.30 ಗಂಟೆಯೊಳಗೆ. |
| 4 | ವಯೋಮಿತಿ | ಕನಿಷ್ಟ 18 ಮತ್ತು ಗರಿಷ್ಟ 40 ವರ್ಷ |
| 5 | ವೇತನ | ರೂ. 30,053-/ (ಎಲ್ಲಾ ತೆರಿಗೆ ಹಾಗೂ ಇತ್ಯಾದಿ ಕಡಿತಗೊಳಿಸಿ) |

**ಆರ್ಹತಾ ಷರತ್ತುಗಳು:**

1. ಭಾರತೀಯ ನಾಗರೀಕರಗಿರತಕ್ಕದ್ದು.
2. ವಯೋಮಿತಿ ಕನಿಷ್ಟ 18 ಮತ್ತು ಗರಿಷ್ಟ 40 ವರ್ಷ.
3. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಬಂಧ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
4. ಅಭ್ಯರ್ಥಿಯು ಯಾವುದೇ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿರತಕ್ಕದ್ದಲ್ಲ.
5. ಒಂದು ವರ್ಷಕ್ಕೆ ಮಾತ್ರ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುವುದು. ಒಂದು ವರ್ಷದ ಸೇವೆಯನ್ನು ತೃಪ್ತಿಕರವಾಗಿ ಪೂರೈಸಿದಲ್ಲಿ ಅಗತ್ಯವಿದಲ್ಲಿ ಮಾತ್ರ ಮುಂದಿನ ವರ್ಷಕ್ಕೆ ವಿಸ್ತರಿಸಲಾಗುವುದು. ಇದನ್ನು ಅಭ್ಯರ್ಥಿಯು ಹಕ್ಕು ಎಂದು ತಿಳಿಯತಕ್ಕದ್ದಲ್ಲ.

6. ಅಂತಿಮ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವ ಪೂರ್ವದಲ್ಲಿ ಯಾವುದೇ ಕಾರಣ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದುಗೊಳಿಸುವ ಸಂಪೂರ್ಣ ಹಕ್ಕನ್ನು ಈ ಪ್ರಾಧಿಕಾರವು ಹೊಂದಿರುತ್ತದೆ.
7. ಹೆಚ್ಚಿನ ಮಾಹಿತಿಗಾಗಿ ಮೇಲಿನ ಕಚೇರಿ ವಿಳಾಸಕ್ಕೆ ಕಚೇರಿ ಸಮಯದಲ್ಲಿ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದಾಗಿದೆ.
8. **ಅಭ್ಯರ್ಥಿಯ ಸ್ವ-ವಿವರ:** 10ನೇ ತರಗತಿ ಅಂಕಪಟ್ಟಿ, ವಿದ್ಯಾಭ್ಯಾಸಕ್ಕೆ ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರ / ದಾಖಲೆಗಳನ್ನು, ನೇಮಕಾತಿ ಆದೇಶಗಳನ್ನು, ಅನುಭವ ಪ್ರಮಾಣ ಪತ್ರಗಳನ್ನು ಹಾಗೂ ಒಂದು ಭಾವಚಿತ್ರ ಮತ್ತು ಆಧಾರ್ ಜೆರಾಕ್ಸ್ ಪ್ರತಿಯನ್ನು ಅರ್ಜಿಯೊಂದಿಗೆ ದೃಢೀಕರಿಸಿ ಲಗತ್ತಿಸಿ ಕೊನೆಯ ದಿನಾಂಕದೊಳಗೆ ಮುದ್ದಾಂ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸುವುದು. ನಿಗದಿಪಡಿಸಿದ ದಿನಾಂಕ ಮತ್ತು ಸಮಯದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

**ಜಿಲ್ಲಾಧಿಕಾರಿ,**
**ಕೊಡಗು ಜಿಲ್ಲೆ, ಮಡಿಕೇರಿ.**

**ಪ್ರತಿಯನ್ನು:-**

1. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಕೊಡಗು ಜಿಲ್ಲೆ, ಮಡಿಕೇರಿ ಇವರಿಗೆ ಮಾಹಿತಗಾಗಿ ಕಳುಹಿಸಿದೆ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕೊಡಗು ಜಿಲ್ಲಾ ಪಂಚಾಯಿತಿ, ಮಡಿಕೇರಿ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಉಪ ವಿಭಾಗಾಧಿಕಾರಿ, ಮಡಿಕೇರಿ ಉಪ ವಿಭಾಗ, ಮಡಿಕೇರಿ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
4. ತಹಶೀಲ್ದಾರ್, ಮಡಿಕೇರಿ, ಸೋಮವಾರಪೇಟೆ, ವಿರಾಜಪೇಟೆ, ಪೊನ್ನಂಪೇಟೆ ಮತ್ತು ಕುಶಾಲನಗರ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
5. **ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಡಿಕೇರಿ ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಪ್ರಕಟಣೆಯನ್ನು ಸ್ಥಳೀಯ ಹಾಗೂ ಒಂದು ರಾಜ್ಯ ಪತ್ರಿಕೆಯಲ್ಲಿ ಸರ್ಕಾರಿ ಸುದ್ದಿ ರೂಪದಲ್ಲಿ ಪ್ರಕಟಿಸಲು ತಿಳಿಸಿದೆ.**
6. **ಜಿಲ್ಲಾ ಮಾಹಿತಿ ತಂತ್ರಜ್ಞಾನ ಅಧಿಕಾರಿ, ಎನ್ ಐ ಸಿ, ಮಡಿಕೇರಿ ಇವರಿಗೆ ಕಳುಹಿಸುತ್ತಾ, ಮೇಲ್ಕಂಡ ಪ್ರಕಟಣೆಯನ್ನು ಹಾಗೂ ಅರ್ಜಿ ನಮೂನೆಯನ್ನು ಜಿಲ್ಲೆಯ ಅಧಿಕೃತ ವೆಬ್ ಸೈಟ್** https://kodagu.nic.in **ರಲ್ಲಿ ಅಪ್ ಲೋಡ್ ಮಾಡಲು ಕ್ರಮವಹಿಸುವಂತೆ ಸೂಚಿಸಿದೆ.**
7. **ಕಚೇರಿ ಕಡತಕ್ಕೆ.**

ಅರ್ಜಿ ನಮೂನೆ

ಭಾವಚಿತ್ರ

| | | |
|---|---|---|
| 1 | ಅಭ್ಯರ್ಥಿಯ ಹೆಸರು | |
| 2 | ತಂದೆಯ / ಗಂಡನ ಹೆಸರು | |
| 3 | ಪೂರ್ಣ ವಿಳಾಸ | |
| 4 | ಮೊಬೈಲ್ ಸಂಖ್ಯೆ | |
| 5 | ಇ-ಮೇಲ್ ವಿಳಾಸ | |
| 6 | ಜನ್ಮ ದಿನಾಂಕ (10ನೇ ತರಗತಿ ಅಂಕಪಟ್ಟಿಯಲ್ಲಿದ್ದಂತೆ ದಾಖಲೆ ಲಗತ್ತಿಸುವುದು) | |
| 7 | ಶೈಕ್ಷಣಿಕ ವಿದ್ಯಾರ್ಹತೆ ಶೇಕಡವಾರ ಗಳಿಸಿರುವ ಅಂಕಗಳ ವಿವರ (ಎಲ್ಲಾ ಅಂಕಪಟ್ಟಿಗಳು ಹಾಗೂ ಪ್ರಮಾಣ ಪತ್ರಗಳನ್ನು ದೃಢೀಕರಿಸಿ ನಕಲುಗಳನ್ನು ಅರ್ಜಿಯೊಂದಿಗೆ ಲಗತ್ತಿಸುವುದು) | |
| 8 | ಕನಿಷ್ಠ 2 ವರ್ಷಗಳ ಅನುಭವ ಪ್ರಮಾಣ ಪತ್ರಗಳು<br><br>(ನೇಮಕಾತಿ ಆದೇಶ ಮತ್ತು ಅನುಭವ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು) | |
| 9 | ಅಭ್ಯರ್ಥಿ ನೀಡಲಿಚ್ಛಿಸುವ ಇತರೆ ದಾಖಲೆಗಳು | |

ಸ್ಥಳ :
ದಿನಾಂಕ:

ಅಭ್ಯರ್ಥಿಯ ಸಹಿ

ಅಭ್ಯರ್ಥಿಯ ಹೆಸರು